1. ಪಾಂಡವಪುರ (ಮೇಲುಕೋಟೆ) – ಹಿಂದುಳಿದ ವರ್ಗ
2. ಕೆರೆ ತೊಣ್ಣೂರು, ಪಾಂಡವಪುರ ತಾಲ್ಲೂಕು – ಸಾಮಾಜ್ಯ
3. ಪಾಂಡವಪುರ, ಬೇಬಿ ಬೆಟ್ಟ – ಹಿಂದುಳಿದ ವರ್ಗ

ಮೇಲ್ಕಂಡ ಮೂರು ವಸತಿ ಶಾಲೆಗಳ ಪೈಕಿ ಕೆರೆತೊಣ್ಣೂರು, ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲಾಗಿದ್ದು, ಶಾಲೆಯು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ.

ಮೊರಾರ್ಜಿ ದೇಸಾಯಿ ವಸತಿ ಶಾಲೆ ಮೇಲುಕೋಟೆಗೆ ಸರ್ಕಾರಿ ಜಮೀನನ್ನು ಗುರ್ತಿಸಲಾಗಿದ್ದು, ಸದರಿ ಜಮೀನು ಮಂಜೂರು ಆಗಬೇಕಾಗಿದೆ.

ಮೊರಾರ್ಜಿ ದೇಸಾಯಿ ವಸತಿ ಶಾಲೆ, ಬೇಬಿ ಬೆಟ್ಟ ಇದಕ್ಕೆ ಜಮೀನು ಲಭ್ಯವಿರುವುದಿಲ್ಲ. ಸರ್ಕಾರಿ ಅಥವಾ ಖಾಸಗೀ ಜಮೀನು ಪಡೆಯಲು ಕ್ರಮ ವಹಿಸಲಾಗಿದೆ.

ಎರಡು ವಸತಿ ಶಾಲೆಗಳಲ್ಲಿ ಜಮೀನು ಲಭ್ಯವಾದ ತಕ್ಷಣ ಕಟ್ಟಡ ನಿರ್ಮಾಣ ಕಾರ್ಯ ಕೈಗೆತ್ತಿಕೊಳ್ಳಲಾಗುವುದು.

ಮೊರಾರ್ಜ ವಸತಿ ಶಾಲೆಗೆ ಸ್ವಂತ ಕಟ್ಟಡ ನಿರ್ಮಾಣ

527 ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಸ್ವಂತ ಕಟ್ಟಡದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿಯೇ;

ಆ) ಸ್ವಂತ ಕಟ್ಟಡ ನಿರ್ಮಾಣಕ್ಕೆ ಸ್ಥಳ ಗುರುತಿಸಿ ಇಲಾಖೆಯವರು ಪ್ರಸ್ತಾವನೆ ಸಲ್ಲಿಸಿದ್ದಾರೆಯೇ;

ಇ) ಎಷ್ಟು ಅವಧಿಯಲ್ಲಿ ಈ ಶಾಲೆಯನ್ನು ಸ್ವಂತ ಕಟ್ಟಡದಲ್ಲಿ ನಡೆಸಲು ಕ್ರಮ ಕೈಗೊಳ್ಳಲಾಗುವುದು;

ಈ) ಈ ಶಾಲೆಯ ಕಟ್ಟಡ ಕಾಮಗಾರಿಗೆ ಅನುದಾನ ಕಾಯ್ದಿರಿಸಲಾಗಿದೆಯೇ;

ಉ) 2009–10ನೇ ಸಾಲಿಗೆ ಕಾಯ್ದಿರಿಸಿದ ಮೊತ್ತವೆಷ್ಟು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆರವರು ಕಸಬಾ ಹೋಬಳಿ, ಚಿಕ್ಕನಾಯಕನಹಳ್ಳಿ ತಾಲ್ಲೂಕು, ಮೇಲನ ಹಳ್ಳಿ ಗ್ರಾಮ ಸರ್ವೇ ನಂ.98 ರಲ್ಲಿ 5 ಎರಕೆ ಜಮೀನು ಮಂಜೂರಾತಿ ಮಾಡಿರುತ್ತಾರೆ. ಮಂಜೂರಾದ ಜಮೀನು ಗುಡ್ಡ ಪ್ರದೇಶವಾಗಿದ್ದು, ಕಟ್ಟಡ ನಿರ್ಮಾಣಕ್ಕೆ ಸೂಕ್ತವಾಗಿಲ್ಲದ ಕಾರಣ ಅದೇ ಗ್ರಾಮ ಸರ್ವೇ ನಂ.98 ರಲ್ಲಿ 5 ಎಕರೆ ಜಮೀನನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಗಳನ್ನು ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ಕೋರಿದ್ದಾರೆ. ಆ ಜಮೀನು ಮಂಜೂರಾಗುವ ನಿರೀಕ್ಷೆಯಲ್ಲಿದೆ.

ಇ) ಜಮೀನು ಲಭ್ಯವಾಗಿ ಇಲಾಖೆಗೆ ಹಸ್ತಾಂತರಿಸಿದ ತಕ್ಷಣ 15 ತಿಂಗಳೊಳಗಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸಿ ವಸತಿ ಶಾಲೆಯನ್ನು ಸ್ವಂತ ಕಟ್ಟಡಕ್ಕೆ ವರ್ಗಾಯಿಸಲಾಗುವುದು.

ಈ) ಹೌದು.

ಉ) ಕಟ್ಟಡದ ಅಂದಾಜು ವೆಚ್ಚ ಸುಮಾರು ರೂ.462/– ಲಕ್ಷಗಳಾಗಲಿದ್ದು, ಈ ಹಣವನ್ನು ಕಾಯ್ದಿರಿಸಿಕೊಳ್ಳಲಾಗಿದೆ.

537 ಶ್ರೀ ಮಾಡಾಳ್ ವಿರೂಪಾಕ್ಷಪ್ಪ ಕೆ. (ಚೆನ್ನಗಿರಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚೆನ್ನಗಿರಿ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿಯಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಯಾವ ಯಾವ ಆಸ್ಪತ್ರೆಗಳಲ್ಲಿ ಎಷ್ಟು ವರ್ಷಗಳಿಂದ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇವೆ; (ವಿವರ ಒದಗಿಸುವುದು)

ಇ) ಯಾವಾಗ ಖಾಲಿಯಿರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲಾಗುವುದು;

ಈ) ಈಗಾಗಲೇ ಪ್ರಾಥಮಿಕ ಆರೋಗ್ಯ ಕೇಂದ್ರ, ಸಂತೇಬೆನ್ನೂರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಕೋಗಲೂರು ಇಲ್ಲಿ ವೈದ್ಯಾಧಿಕಾರಿಗಳ